# All India Radio: Bangalore
# Regional Bulletin In Kannada
# 19.02.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ಮುಡಾ ಹಗರಣದಲ್ಲಿ ಸಾಕ್ಷ್ಯಾಧಾರಗಳ ಕೊರತೆ; ಉಚ್ಚ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಲಿರುವ ಲೋಕಾಯುಕ್ತ ಪೊಲೀಸ್
2. ಅನ್ನಭಾಗ್ಯ ಯೋಜನೆಯಡಿ ಬಾಕಿ ಹಣ ಶೀಘ್ರವೇ ಪಾವತಿ - ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಸ್ಪಷ್ಟನೆ
3. ಭೂ ಮಾಪಕರಿಗೆ ೪೬೫ ರೋವರ್ ಉಪಕರಣ ಹಸ್ತಾಂತರಿಸಿದ ಕಂದಾಯ ಸಚಿವ ಕೃಷ್ಣಬೈರೇಗೌಡ
4. ಸರ್ಕಾರದಿಂದ ದುರುದ್ದೇಶ ಪೂರ್ವಕವಾಗಿ ಕೇತಗಾನಹಳ್ಳಿ ಭೂ ಸಮೀಕ್ಷೆ - ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪ
5. ಬೆಂಗಳೂರಿನಲ್ಲಿ ದಾಖಲೆ ಉಷ್ಣಾಂಶ; ಬೇಸಿಗೆಯಲ್ಲಿ ತೀವ್ರ ತಾಪಮಾನದ ಮುನ್ಸೂಚನೆ ನೀಡಿದ ಹವಾಮಾನ ಇಲಾಖೆ

<><><><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಸೂಕ್ತ ಸಾಕ್ಷ್ಯಾಧಾರ ಕೊರತೆ ಇದೆ ಎಂದು ಲೋಕಾಯುಕ್ತ ಪೊಲೀಸರು ವರದಿ ಸಲ್ಲಿಸಿದ್ದಾರೆ. ಪ್ರಕರಣದ ಆರೋಪ ಸಾಬೀತಾಗಿಲ್ಲ. ಈ ಕುರಿತು ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಲಾಗುತ್ತಿದೆ ಎಂದು ಪ್ರಕರಣದ ತನಿಖಾಧಿಕಾರಿ ಪಿ.ಜೆ.ಉದೇಶ್ ತಿಳಿಸಿದ್ದಾರೆ. ಈ ಬಗ್ಗೆ ಆಕ್ಷೇಪಣೆಗಳು ಇದ್ದಲ್ಲಿ ಒಂದು ವಾರದೊಳಗೆ ಸಂಬಂಧಿಸಿದ ನ್ಯಾಯಾಧೀಶರ ಮುಂದೆ ಆಕ್ಷೇಪಣೆ ಸಲ್ಲಿಸುವಂತೆ ದೂರುದಾರರಿಗೆ ಸೂಚಿಸಿದ್ದಾರೆ.

<><><><>

ಮುಡಾ ಪ್ರಕರಣದಲ್ಲಿ ಸೂಕ್ತ ಸಾಕ್ಷ್ಯಧಾರಗಳ ಕೊರತೆ ಇದೆ ಎಂದು ತಮಗೆ ನೋಟೀಸ್ ನೀಡಲಾಗಿದೆ ಎಂದು ಆರ್ ಟಿ ಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಾಯುಕ್ತ ಅಧಿಕಾರಿಗಳು ಬಿ ರಿಪೋರ್ಟ್ ಹಾಕಲು ನಿರ್ಧರಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬವನ್ನು ರಕ್ಷಣೆ ಮಾಡಲು ಹೊರಟಿದ್ದಾರೆ ಎಂದು ಆರೋಪಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್.ಅಶೋಕ ಸಾಮಾಜಿಕ ಜಾಲತಾಣದಲ್ಲಿ ಲೋಕಾಯುಕ್ತ ಅಧಿಕಾರಿಗಳ ನಡವಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ

ತನಿಖೆಯಲ್ಲಿ ನ್ಯಾಯ ದೊರಕುವ ಭರವಸೆ ಯಾರಿಗೂ ಇರಲಿಲ್ಲ. ಲೋಕಾಯುಕ್ತ ಅಧಿಕಾರಿಗಳು ಸಮರ್ಪಕ ತನಿಖೆ ನಡೆಸದೆ ಪ್ರಕರಣವನ್ನು ಮುಚ್ಚಿ ಹಾಕಿದ್ದಾರೆ ಎಂದು ದೂರಿದ್ದಾರೆ.

<><><>

ಅನ್ನ ಭಾಗ್ಯ ಯೋಜನೆಯಲ್ಲಿ ಹಣದ ಬದಲು ೧೦ ಕೆ.ಜಿ ಅಕ್ಕಿ ನೀಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆಹಾರ ಸಚಿವ ಕೆ.ಎಚ್.ಮುನಿಯಪ್ಪ, ಅನ್ನಭಾಗ್ಯ ಯೋಜನೆಯಡಿ ಪ್ರತಿ ಫಲಾನುಭವಿಗೆ ೧೦ ಕೆ.ಜಿ. ಅಕ್ಕಿ ಘೋಷಣೆ ಮಾಡಲಾಗಿತ್ತು. ಕೇಂದ್ರದಿಂದ ಅಕ್ಕಿ ಲಭ್ಯವಾಗದ ಕಾರಣ ೫ ಕೆ.ಜಿ ಅಕ್ಕಿಯ ಜೊತೆಗೆ ೧೭೩ ರೂಪಾಯಿ ನಗದು ವರ್ಗಾವಣೆ ಮಾಡಲಾಗುತಿತ್ತು. ಇದೀಗ ಕೇಂದ್ರ ಸರ್ಕಾರ ೨೨ ರೂಪಾಯಿ ೫೦ ಪೈಸೆ ದರದಲ್ಲಿ ಅಕ್ಕಿ ಸರಬರಾಜು ಮಾಡಲು ಒಪ್ಪಿಗೆ ಸೂಚಿಸಿದೆ. ಈ ತಿಂಗಳಿನಿಂದಲೇ ಗ್ರಾಹಕರಿಗೆ ಅಕ್ಕಿ ವಿತರಿಸಲು ತೀರ್ಮಾನಿಸಲಾಗಿದೆ ಎಂದು ಸಚಿವ ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.  ಬಾಕಿ ಇರುವ ನವೆಂಬರ್, ಡಿಸೆಂಬರ್, ಜನವರಿಯ ಅನ್ನಭಾಗ್ಯ ಯೋಜನೆಯ ಹಣವನ್ನು ಶೀಘ್ರವೇ ಪಾವತಿಸಲಾಗುವುದು ಎಂದು ತಿಳಿಸಿದ್ದಾರೆ. ಜುಲೈ ೨೦೨೩ ರಿಂದ ಅಕ್ಟೋಬರ್ ೨೦೨೪ರವರೆಗೆ ೧೦ ಸಾವಿರದ ೪೫೨ ಕೋಟಿ ರೂಪಾಯಿ ಹಣವನ್ನು ಡಿಬಿಟಿ ಮೂಲಕ ವರ್ಗಾವಣೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಭೂಮಾಪನ ಇಲಾಖೆಯಲ್ಲಿ ಹೊಸದಾಗಿ ಖರೀದಿಸಿರುವ ಆಧುನಿಕ ಅಳತೆಯ ೪೬೫ ರೋವರ್ ಉಪಕರಣಗಳನ್ನು ಕಂದಾಯ ಸಚಿವ ಕೃಷ್ಣ ಬೈರೇಗೌಡ ಬೆಂಗಳೂರಿನಲ್ಲಿಂದು ಭೂಮಾಪಕರಿಗೆ ವಿತರಿಸಿದರು. ಬಳಿಕ ಮಾತನಾಡಿದ ಅವರು, ಕಂದಾಯ ಇಲಾಖೆ ಆಡಳಿತದ ಅಡಿಪಾಯದ ಜೊತೆಗೆ ಸರ್ಕಾರದ ಬೆನ್ನೆಲುಬಾಗಿದೆ. ಸರ್ವೆಷಣೆ ಕಾರ್ಯದಲ್ಲಿ ಹಳೆಯ ತಂತ್ರಜ್ಞಾನವನ್ನೇ ಬಳಸಲಾಗುತಿದ್ದು, ಇದರಿಂದ ಸಮಯ ವ್ಯರ್ಥವಾಗುತ್ತಿದೆ. ಇದನ್ನು ಮನಗಂಡು ಆಧುನಿಕ ತಂತ್ರಜ್ಞಾನಗಳನ್ನು ಸರ್ವೆಷಣೆ ಇಲಾಖೆಯಲ್ಲಿ ಅಳವಡಿಸಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ. ನಿಖರವಾಗಿ ಸರ್ವೆಷಣೆ ಮಾಡಲು ರೋವರ್ ಯಂತ್ರ ಸಹಕಾರಿಯಾಗಲಿದೆ. ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವುದರಿಂದ ಸಿಬ್ಬಂದಿಯ ಮೇಲಿನ ಒತ್ತಡ ಶೇಕಡ ೫೦ಕ್ಕೂ ಮೀರಿ ಕಡಿಮೆಯಾಗಲಿದೆ ಎಂದು ಕೃಷ್ಣಬೈರೇಗೌಡ ಹೇಳಿದ್ದಾರೆ.

<><><>

ತಮ್ಮಿಂದ ೧೪ ಎಕರೆ ಸರ್ಕಾರಿ ಭೂಮಿ ಅತಿಕ್ರಮಣವಾಗಿದೆ ಎಂದು  ರಾಜ್ಯ ಸರ್ಕಾರ ಆರೋಪ ಹೊರಿಸಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇತಗಾನಹಳ್ಳಿ ಭೂ ಸಮೀಕ್ಷೆಯನ್ನು ಸರ್ಕಾರ ಉದ್ದೇಶಪೂರ್ವಕವಾಗಿ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ. ತಮ್ಮ ಆಸ್ತಿ ಎಂದು ಸಾಬೀತುಪಡಿಸಲು ಎಲ್ಲಾ ದಾಖಲೆಗಳಿವೆ ಎಂದು ಪ್ರತಿಪಾದಿಸಿದ್ದಾರೆ. ೪೦ ವರ್ಷಗಳ

ಹಿಂದೆ ಖರೀದಿಸಿದ್ದ ಈ ಆಸ್ತಿಯನ್ನು ೧೦ಕ್ಕೂ ಹೆಚ್ಚು ಬಾರಿ ಸರ್ವೇ ಮಾಡಲಾಗಿದ್ದು, ಹಲವಾರು ಬಾರಿ ತನಿಖೆ ನಡೆಸಲಾಗಿದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾತಿ ಗಣತಿ ಮೂಲಕ ರಾಜ್ಯದ ಪ್ರಮುಖ ಸಮುದಾಯಗಳನ್ನು ವಿಭಜಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಕೇಂದ್ರ ಕಾರ್ಮಿಕ, ಉದ್ಯೋಗ, ಸಣ್ಣ, ಅತಿ ಸಣ್ಣ, ಮಧ್ಯಮ ಕೈಗಾರಿಕೆಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರದ್ದು, ಒಡೆದು ಆಳುವ ಮನಸ್ಥಿತಿ ಎಂದು ದೂರಿದ್ದಾರೆ. ರಾಜ್ಯದಲ್ಲಿ ಒಂದೇ ಒಂದು ಅಭಿವೃದ್ಧಿ ಕಾರ್ಯ ನಡೆಯುತ್ತಿಲ್ಲ ಎಂದು ಆರೋಪಿಸಿದ ಅವರು ಮುಖ್ಯಮಂತ್ರಿ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಇದೇ ವೇಳೆ, ೯ ನೂತನ ವಿಶ್ವವಿದ್ಯಾಲಯಗಳನ್ನು ಮುಚ್ಚುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><>

ಬೆಳಗಾವಿ ಜನತೆಗೆ ನೀರಿನ ಕೊರತೆ ಇರುವಾಗ ಹಿಡಕಲ್ ಅಣೆಕಟ್ಟೆನಿಂದ ಧಾರವಾಡಕ್ಕೆ ನೀರು ಬಿಡುವುದು ಸೂಕ್ತ ನಿರ್ಧಾರವಲ್ಲ ಎಂದು ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಕಾರಣಕ್ಕೆ ನೀರು ಬಿಡಲಾಗುತ್ತಿದೆ ಮತ್ತು ಎಷ್ಟು ಪ್ರಮಾಣದ ನೀರು ಬಿಡಲು ಮುಂದಾಗಿದೆ ಎಂಬುದರ ಬಗ್ಗೆ ಬೆಳಗಾವಿ ಜಿಲ್ಲಾಡಳಿತ, ಉಸ್ತುವಾರಿ ಸಚಿವರು ಹಾಗೂ ಸರ್ಕಾರ ಮೊದಲು ಸ್ಪಷ್ಟೀಕರಣ ಕೊಡಬೇಕು ಎಂದು ಆಗ್ರಹಿಸಿದ್ದಾರೆ.

<><><>

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಹಿನ್ನೆಲೆಯಲ್ಲಿ ಪೋಷಕರಿಗೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ್ ಪತ್ರ ಬರೆದಿದ್ದಾರೆ. ಮಕ್ಕಳ ಶೈಕ್ಷಣಿಕ ಪ್ರಕ್ರಿಯೆಯಲ್ಲಿ ೧೦ನೇ ತರಗತಿಯ ಪರೀಕ್ಷೆಯು ಒಂದು ಮಹತ್ವದ ಹಂತವಾಗಿದೆ ಎಂದು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಪರೀಕ್ಷೆಗೆ ೪೦ ದಿನ ಬಾಕಿಯಿದ್ದು, ಈ ಹಂತದಲ್ಲಿ ಕೃಷಿ ಸಂಬಂಧಿತ ಅಥವಾ ಇನ್ನಿತರ ಮನೆ ಕೆಲಸಗಳಲ್ಲಿ ತೊಡಗಿಸಿಕೊಳ್ಳದಿರಿ. ಮಕ್ಕಳು ಟಿವಿ, ಮೊಬೈಲ್ ಬಳಸದಂತೆ ಎಚ್ಚರಿಕೆ ವಹಿಸಿ. ನಿತ್ಯ ಶಾಲೆಗೆ ಕಳುಹಿಸಿಕೊಡುವುದರ ಮೂಲಕ ಅವರಿಗೆ ಓದಲು ಪ್ರೋತ್ಸಾಹಿಸಿ ಎಂದು ಪತ್ರದ ಮೂಲಕ ಮನವಿ ಮಾಡಿದ್ದಾರೆ.

<><><>

ಬೆಳಗಾವಿಯಲ್ಲಿ ಇಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಂಯುಕ್ತ ಆಶ್ರಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಛತ್ರಪತಿ ಶಿವಾಜಿ

ಮಹಾರಾಜರ ೩೯೫ನೇ  ಜಯಂತಿ ಕಾರ್ಯಕ್ರಮ ಆಚರಿಸಲಾಯಿತು. ಛತ್ರಪತಿ ಶಿವಾಜಿ ಮಹಾರಾಜರು ಶೌರ್ಯ ಪರಾಕ್ರಮ ಮತ್ತು ಸ್ವಾಭಿಮಾನಕ್ಕೆ ಹೆಸರಾಗಿದ್ದು, ಹಿಂದೂ ಧರ್ಮದ ರಕ್ಷಣೆಗೆ ಹೋರಾಡಿದ್ದರು ಎಂದು ಗೌರಿಬಿದನೂರು ಶಾಸಕ ಕೆ.ಹೆಚ್.ಪುಟ್ಟಸ್ವಾಮಿ ಗೌಡ ಅಭಿಪ್ರಾಯಪಟ್ಟಿದ್ದಾರೆ. ಶೌರ್ಯ, ಧೈರ್ಯ, ಸಾಹಸಕ್ಕೆ ಮತ್ತೊಂದು ಹೆಸರಾದ ಛತ್ರಪತಿ ಶಿವಾಜಿಯವರ ಸಾಧನೆ ಮತ್ತು ವ್ಯಕ್ತಿತ್ವವನ್ನು ನಾವು ಮಕ್ಕಳಿಗೆ ಬಾಲ್ಯದಿಂದಲೇ ತಿಳಿಸಿ ಮಹಾನ್ ವ್ಯಕ್ತಿಯಾಗಿ ರೂಪಿಸಬೇಕು ಎಂದು ಮಂಡ್ಯ ಅಪರ ಜಿಲ್ಲಾಧಿಕಾರಿ ಬಿ. ಸಿ ಶಿವಾನಂದಮೂರ್ತಿ ಕರೆ ನೀಡಿದ್ದಾರೆ.

<><><><>

ಬೆಂಗಳೂರು ನಗರವು ಫೆಬ್ರವರಿ ತಿಂಗಳಲ್ಲಿ ೨೦ ವರ್ಷಗಳ ಗರಿಷ್ಠ ತಾಪಮಾನವನ್ನು ದಾಖಲಿಸಿದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ. ಆಕಾಶವಾಣಿ ಸುದ್ದಿ ವಿಭಾಗದೊಂದಿಗೆ ಮಾತನಾಡಿದ ಅವರು, ಈ ಬಾರಿ ಫೆಬ್ರವರಿ ತಿಂಗಳಲ್ಲಿ ೩೪ ಡಿಗ್ರಿ ಉಷ್ಣಾಂಶ ದಾಖಲಾಗಿದೆ ಎಂದು ಹೇಳಿದ್ದಾರೆ. ಈ ವರ್ಷ ಬೇಸಿಗೆಯಲ್ಲಿ ಇನ್ನಷ್ಟು ಉಷ್ಣಾಂಶ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್

<><><><>

ಸಂಕ್ಷಿಪ್ತ ಸುದ್ದಿಗಳು

1. ಮೈಸೂರಿನಲ್ಲಿ ಪರಿಶಿಷ್ಟ ಪಂಗಡಗಳ ಜನರು ಹೆಚ್ಚಾಗಿ ಇರುವ ಹಾಡಿಗಳ ಅಭಿವೃದ್ಧಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳ ಸೌಲಭ್ಯಗಳು ಹಾಗೂ ಕಾಮಗಾರಿಗಳ ಪ್ರಗತಿ ಶೇಕಡಾ ೧೦೦ ರಷ್ಟು ಆಗಬೇಕು ಎಂದು ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಅಧಿಕಾರಿಗಳಿಗೆ ತಿಳಿಸಿದ್ದಾರೆ.
2. ಬೆಂಗಳೂರು ಮಹಾನಗರದಲ್ಲಿ ಮಾದಕ ದ್ರವ್ಯ ಹಾವಳಿ ದಿನೇ ದಿನೇ ಹೆಚ್ಚುತ್ತಿದ್ದು ಯುವ ಪೀಳಿಗೆಯನ್ನು ವ್ಯಸನದಿಂದ ಪಾರು ಮಾಡಲು ಸಮಸ್ತರೂ ಕೈಜೋಡಿಸಬೇಕೆಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊಫೆಸರ್ ಲಿಂಗರಾಜ ಗಾಂಧಿ ಮನವಿ ಮಾಡಿದ್ದಾರೆ.
3. ಪಡಿತರ ಹಂಚುವಾಗ ತೂಕದಲ್ಲಿ ಯಾವುದೇ ರೀತಿಯ ಏರುಪೇರು ಆಗದಂತೆ ನೋಡಿಕೊಳ್ಳಬೇಕೆಂದು ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಜಿ.ಕೃಷ್ಣಪ್ಪ ಬೆಂಗಳೂರಿನಲ್ಲಿ ಸೂಚನೆ ನೀಡಿದ್ದಾರೆ.
4. ಸಾರ್ವಜನಿಕರೊಂದಿಗೆ ಪೊಲೀಸರ ವರ್ತನೆ ಶಿಸ್ತು ಬದ್ಧವಾಗಿರಬೇಕು ಎಂದು ರಾಜ್ಯ ಪೊಲೀಸ್ ತರಬೇತಿ ವಿಭಾಗದ ಎಡಿಜಿಪಿ ಅಲೋಕ್ ಕುಮಾರ್ ಮೈಸೂರಿನಲ್ಲಿ ತಿಳಿಸಿದ್ದಾರೆ.

5. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಸಂತ ಕವಿ ಸರ್ವಜ್ಞ ಜಯಂತಿಯನ್ನು ನಾಳೆ ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

6. ಉತ್ತರ ಮಧ್ಯ ರೈಲ್ವೆ ವಲಯದಲ್ಲಿ ವಿವಿಧ ಕಾರ್ಯಾಚರಣೆಯ ಕಾರಣಗಳಿಂದಾಗಿ ಇದೇ ೨೪ ರಂದು ಯಶವಂತಪುರ ನಿಲ್ದಾಣದಿಂದ ಹೊರಡುವ ರೈಲು ಸಂಖ್ಯೆ ೨೨೬೮೩ ಯಶವಂತಪುರ-ಲಕ್ನೋ ಸಾಪ್ತಾಹಿಕ ಸೂಪರ್ ಫಾಸ್ಟ್ ಎಕ್ಸ್ ಪ್ರೆಸ್ ರೈಲು, ಓಹಾನ್ ಕ್ಯಾಬಿನ್, ಬಾಂಡಾ, ಭೀಮಸೇನ್, ಕಾನ್ಪುರ ಸೆಂಟ್ರಲ್ ಮತ್ತು ಲಕ್ನೋ ನಿಲ್ದಾಣಗಳ ಮೂಲಕ ಸಂಚರಿಸಲಿದೆ ಎಂದು ನೈರುತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>